## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗದಗ ಜಿಲ್ಲೆ, ನರಗುಂದ ತಾಲ್ಲೂಕಿನ ಕೊಣ್ಣೂರು ಗ್ರಾಮದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ(BCWD 549) ವನ್ನು ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯವನ್ನಾಗಿ ಉನ್ನತಿಕರಿಸಿ ನರಗುಂದ ಟೌನ್‌ಗೆ ಸ್ಥಳಾಂತರಿಸುವ ಬಗ್ಗೆ.

**ಓದಲಾಗಿದೆ:** ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕಕಡತ ಸಂಖ್ಯೆ: BCWD-12043/27/2022/BCWD-HOSTEL-BCWD

******

**ಪ್ರಸ್ತಾವನೆ:-**

ಮೇಲೆ ಓದಲಾದ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆಯಲ್ಲಿ ಗದಗ ಜಿಲ್ಲೆ, ನರಗುಂದ ತಾಲ್ಲೂಕಿನ ಕೊಣ್ಣೂರು ಗ್ರಾಮದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಕ್ಕೆ ಮಂಜೂರಾತಿ ಸಂಖ್ಯೆಗಿಂತ ಕಡಿಮೆ ಅರ್ಜಿಗಳು ಸ್ವೀಕೃತವಾಗುತ್ತಿದ್ದು ಸದರಿ ವಿದ್ಯಾರ್ಥಿನಿಲಯವನ್ನು ಸ್ಥಳಾಂತರಿಸಲು ಪ್ರಸ್ತಾಪಿಸಲಾಗಿರುತ್ತದೆ. ಆದರೆ ಪ್ರಸ್ತುತ ಸದರಿ ವಿದ್ಯಾರ್ಥಿನಿಲಯದಲ್ಲಿ 24 ವಿದ್ಯಾರ್ಥಿಗಳು ಪ್ರವೇಶವನ್ನು ಪಡೆದಿರುತ್ತಾರೆ. ಇತನ್ಮಧ್ಯೇ, ಮಲಪ್ರಭಾ ನದಿಯ ಪ್ರವಾಹದಿಂದ ತೊಂದರೆಗಿಡಾಗಿರುವ ಕಾರಣ ಪ್ರಸ್ತುತ ಪ್ರವೇಶಾತಿ ಪಡೆದಿರುವ 24 ವಿದ್ಯಾರ್ಥಿಗಳನ್ನು 6 ಕಿ.ಮೀ ಹತ್ತಿರ ಇರುವ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ಶಿರೋಳ(BCWD-551) ವಸತಿ ನಿಲಯದಲ್ಲಿ ಮೂಲಭೂತ ಸೌಕರ್ಯ ಹಾಗೂ ಸ್ಥಳಾವಕಾಶ ಹೊಂದಿರುವುದರಿಂದ ಸದರಿ ವಿದ್ಯಾರ್ಥಿಗಳನ್ನು ವರ್ಗಾಯಿಸಲು ಹಾಗೂ ನರಗುಂದ ತಾಲ್ಲೂಕಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯದ ಅವಶ್ಯಕತೆಯಿರುವುದರಿಂದ ಗದಗ ಜಿಲ್ಲೆ ನರಗುಂದ ತಾಲ್ಲೂಕಿನ ಕೊಣ್ಣೂರು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವನ್ನು ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ(BCWD-549)ವನ್ನಾಗಿ ಉನ್ನತಿಕರಿಸಿ ನರಗುಂದ ಟೌನ್ ಗೆ ಸ್ಥಳಾಂತರಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 720 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:-12.12.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗದಗ ಜಿಲ್ಲೆ ನರಗುಂದ ತಾಲ್ಲೂಕಿನ ಕೊಣ್ಣೂರು ಗ್ರಾಮದ 45 ಸಂಖ್ಯಾಬಲದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವನ್ನು ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ನರಗುಂದ ಟೌನ್ (BCWD 549) ಉನ್ನತಿಕರಿಸಿ ನರಗುಂದ ಟೌನ್ ಗೆ ಈ ಮುಂದಿನಂತೆ ಸ್ಥಳಾಂತರಿಸಿ ಆದೇಶಿಸಿದೆ.

12/12/22

2...

| | ಹಾಲಿ ಇರುವ ವಿದ್ಯಾರ್ಥಿನಿಲಯದ ಹೆಸರು ಮತ್ತು ಸ್ಥಳ | ಸ್ಥಳಾಂತರಿಸಲಾದ ವಿದ್ಯಾರ್ಥಿನಿಲಯದ ಹೆಸರು ಮತ್ತು ಸ್ಥಳ | ಮಂಜೂರಾತಿ ಸಂಖ್ಯೆ |
|---|---|---|---|
| BCWD-549 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ,ಕೊಣ್ಣೂರು ಗ್ರಾಮ, ನರಗುಂದ ತಾಲ್ಲೂಕು,ಗದಗ ಜಿಲ್ಲೆ (ಉಚಿತ ಕಟ್ಟಡ) | ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ನರಗುಂದ ಟೌನ್, ಗದಗ ಜಿಲ್ಲೆ | 45 |

ಪ್ರಸ್ತುತ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕಣ್ಣೂರು ಇಲ್ಲಿಗೆ ಪ್ರವೇಶಾತಿ ಹೊಂದಿರುವ ವಿದ್ಯಾರ್ಥಿಗಳನ್ನು 50 ಸಂಖ್ಯಾಬಲದ ಗದಗ ಜಿಲ್ಲೆ ನರಗುಂದ ತಾಲ್ಲೂಕಿನ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಶಿರೋಳ (BCWD-551) ಇಲ್ಲಿಗೆ ವರ್ಗಾಯಿಸಲು ಕ್ರಮವಹಿಸುವುದು.

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆ ಹಾಗೂ ಮಾನ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Sheenparveen 12/12/2022

(ಷಾಹೀನ್ ಪರ್ವೀನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು , (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಗದಗ.
4. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಗದಗ ಜಿಲ್ಲೆ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**********